ಆ. ಹಾಗಿದ್ದಲ್ಲಿ, ಈ ಮೇಲ್ಕಂಡ ಗ್ರಾಮಗಳಿಗೆ ಪದವಿ ಪೂರ್ವ ಕಾಲೇಜನ್ನು 1993-94ರಲ್ಲಿ ಮಂಜೂರು ಮಾಡಲಾಗಿದೆಯೇ;

ಇ. ಇಲ್ಲದಿದ್ದಲ್ಲಿ, ಅದನ್ನು ಮಂಜೂರು ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀಮತಿ ನಾಗಮ್ಮ ಸಿ.ಕೇಶವಮೂರ್ತಿ

(ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

ಹೌದು

ಇಲ್ಲ

ಪರಿಶೀಲಿಸಲಾಗುವುದು.

ವಿಷಯ:- ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಹಳ್ಳಿ ಮೈಸೂರು ಹೋಬಳಿ ಕೇಂದ್ರಕ್ಕೆ ಒಂದು ಪ್ರಥಮದರ್ಜೆ ಕಾಲೇಜು ಮಂಜೂರು.

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ 248(197)

ಶ್ರೀ ಜಿ. ಪುಟ್ಟಸ್ವಾಮಿಗೌಡ(ಹೊಳೆನರಸೀಪುರ)

ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?.

ಅ) ಹೊಳೆನರಸೀಪುರ ತಾಲ್ಲೂಕಿನ ಹಳ್ಳಿ ಮೈಸೂರಿನಲ್ಲಿ ಪ್ರಥಮದರ್ಜೆ ಕಾಲೇಜು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ 1993-94ನೇ ಸಾಲಿನಲ್ಲಿ ಹಳ್ಳಿ ಮೈಸೂರಿನಲ್ಲಿ ಪ್ರಥಮದರ್ಜೆ ಕಾಲೇಜನ್ನು ಸ್ಥಾಪಿಸಲು ಸರ್ಕಾರವು ಮಂಜೂರಾತಿ ನೀಡಿರುವುದೇ?

ಶ್ರೀ ಎಸ್.ಎಂ.ಯಾಹ್ಯಾ

(ಉನ್ನತ ಶಿಕ್ಷಣ ಸಚಿವರು)

ಬಂದಿದೆ.

ಇಲ್ಲ.

ವಿಷಯ:- ರಾಜ್ಯದಲ್ಲಿ ನಿವೃತ್ತ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಕರನ್ನು ನೇಮಿಸಿಕೊಳ್ಳುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 249(444)

ಶ್ರೀ ಜಿ.ಪುಟ್ಟಸ್ವಾಮಿಗೌಡ(ಹೊಳೆನರಸೀಪುರ)

ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ರಾಜ್ಯದಲ್ಲಿ ಸರ್ಕಾರಿ ಹಾಗೂ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು;

ಆ. ಈ ಖಾಲಿ ಹುದ್ದೆಗಳಿಗೆ ನಿವೃತ್ತ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರನ್ನು ನೇಮಿಸಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ;

ಇ. ಹಾಗಿದ್ದಲ್ಲಿ, ನಿರುದ್ಯೋಗಿಗಳಿಗೆ ವಂಚನೆ ಮಾಡಿದಂತಾಗುವುದಿಲ್ಲವೇ;

ಈ. ಕೂಡಲೇ ಈ ಖಾಲಿ ಹುದ್ದೆಗಳಿಗೆ ನಿರುದ್ಯೋಗಿ ಶಿಕ್ಷಕರನ್ನು ನೇಮಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳತ್ತಿದೆಯೇ?

ಶ್ರೀಮತಿ. ನಾಗಮ್ಮ ಸಿ.ಕೇಶವಮೂರ್ತಿ

(ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)